ದಿನಾಂಕಃ 26-11-2015
ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.
ಮುಖ್ಯ ವಿಚಾರಣೆ ಃ ಶ್ರೀ ಕೆ.ಯು ವಕೀಲರಿಂದ ಃ –

ನಾನು ಸಲ್ಲಿಸಿದ ಪ್ರಮಾಣ ಪತ್ರದಲ್ಲಿ ಬರೆದ ಎಲ್ಲ ಸಂಗತಿಗಳು ಸರಿ ಇದೆ. ಅದರಲ್ಲಿ ಇರುವ ರುಜು ನನ್ನ ರುಜುವಾಗಿದೆ. ನನ್ನ ಕುಟುಂಬಕ್ಕೆ ಸಂಬಂಧಪಟ್ಟಂತೆ ವಂಶವೃಕ್ಷವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು ಗುರುತಿಸಲಾಯಿತು. ದಾವಾಆಸ್ತಿಗಳಿಗೆ ಸಂಬಂಧಪಟ್ಟಂತೆ 3 ಆರ್.ಟಿ.ಸಿ ಮತ್ತು ಎಮ್.ಆರ್. ಕಾಪಿ, ತೆರಿಗೆ ಬೇಡಿಕೆ ಡಿಮ್ಯಾಂಡ್ ರೆಜಿಸ್ಟರ್‌ಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-2 ರಿಂದ 6 ಎಂದು ಗುರುತಿಸಲಾಯಿತು. ದಾವಾಆಸ್ತಿಗೆ ಸಂಬಂಧಪಟ್ಟಂತೆ ದಿನಾಂಕಃ 08-10-2009 ರ ಕೌಟುಂಬಿಕ ಪಾಲುವಿಭಾಗ ಪತ್ರದ ದೃಢೀಕೃತ ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು ಗುರುತಿಸಲಾಯಿತು. ಪ್ರತಿವಾದಿಗಳಿಗೆ ನೀಡಿದಂತಹ ತಿಳುವಳಿಕೆ ನೋಟಿಸವನ್ನು ಹಾಜರುಪಡಿಸಿದ್ದು ಅದನ್ನು ನಿಪಿ-8 ಹಾಗೂ ಅಂಚೆ ಲಕೋಟೆಯನ್ನು ನಿಪಿ-9 ಮತ್ತು 6 ಅಂಚೆ ರಸೀಧಿಗಳನ್ನು ನಿಪಿ-10 ಎಂದು ಗುರುತಿಸಲಾಯಿತು. ನೋಟಿಸಿಗೆ ಪ್ರತಿವಾದಿಗಳು ನೀಡಿರುವಂತಹ ಉತ್ತರದ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ-11 ಎಂದು ಗುರುತಿಸಲಾಯಿತು.

ವಾದಿ ಪರ ವಕೀಲರ ಮನವಿಯ ಮೇರೆಗೆ ಮುಂದುವರೆದ ಮುಖ್ಯ ವಿಚಾರಣೆಗಾಗಿ ಕಾಲಾವಕಾಶ ಕೋರಿದ್ದು , ಪ್ರಕರಣವನ್ನು ಮುಖ್ಯ ವಿಚಾರಣೆಗಾಗಿ ಮುಂದೂಡಲಾಯಿತು.

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರ್‌ಗೊಳಿಸಿ ಪ್ರಿಂಟ್ ತೆಗೆಯಲಾಯಿತು)

ಓ. ಹೇ. ಕೇ. ಸರಿ ಇದೆ.

ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಸಿರಾ.

ಓ.ಎಸ್. :322/2014
ಪಿಡಬ್ಲ್ಯೂ: 1

ದಿನಾಂಕಃ **23-02-2016.**
ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು.
ಮುಂದುವರೆದ ಮುಖ್ಯ ವಿಚಾರಣೆ ಃ ಶ್ರೀ ಎಚ್.ಪಿ ವಕೀಲರಿಂದ ಃ –

ಕೆವಿಯಟ್ ನಂ.39/2014 ರ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-12 ಎಂದು ಗುರುತಿಸಲಾಯಿತು. ದಾವೆಯಲ್ಲಿ ಕೇಳಿರುವಂತೆ ದಾವೆಯನ್ನು ಡಿಕ್ರಿ ಮಾಡಲು ಕೇಳಿಕೊಳ್ಳುತ್ತೇನೆ.

ಪ್ರತಿವಾದಿ ಪರ ವಕೀಲರ ಮನವಿಯ ಮೇರೆಗೆ ಪಾಟೀ ಸವಾಲಿಗೆ ಕಾಲಾವಕಾಶ ಕೋರಿದ್ದು , ಪ್ರಕರಣವನ್ನು ಪಾಟೀ ಸವಾಲಿಗಾಗಿ ಮುಂದೂಡಲಾಯಿತು.
(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ಕಂಪ್ಯೂಟರ್‌ಗೊಳಿಸಿ ಪ್ರಿಂಟ್ ತೆಗೆಯಲಾಯಿತು)
ಓ. ಹೇ. ಕೇ. ಸರಿ ಇದೆ.

ಅಧಿಕ ಸಿವಿಲ್ ನ್ಯಾಯಾಧೀಶರು ಮತ್ತು
ಜೆ.ಎಂ.ಎಫ್.ಸಿ. ಸಿರಾ.